# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಕಾರ್ಯಪಾಲಕ ಇಂಜಿನಿಯರ್, ಮೈಸೂರು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಕ್ಕೆ ಹೊಸ ವಾಹನ ಖರೀದಿಸುವ ಬಗ್ಗೆ.

**ಓದಲಾಗಿದೆ:-** ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮೈಸೂರು ಇವರ ಪತ್ರ ಸಂಖ್ಯೆ. ಎಡಿಎಂ(2)/66/2010-11, ದಿನಾಂಕ. 8-2-2012.

*****

**ಪ್ರಸ್ತಾವನೆ:**

ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಮೈಸೂರು ಇವರು ಗ್ರಾಮೀಣ ನೀರು ಸರಬರಾಜು ಯೋಜನೆಗಳು, ರಸ್ತೆ ಸೇತುವೆ ಹಾಗೂ ಇತರೆ ಕಾಮಗಾರಿಗಳ ಉಸ್ತುವಾರಿಯನ್ನು ಮಾಡಬೇಕಾಗಿರುತ್ತದೆ. ಹಾಲಿ ಇರುವ ವಾಹನವು ಹಳೆಯದಾಗಿದ್ದು, ಕಚ್ಚಾ ರಸ್ತೆಯಲ್ಲಿ ಸಂಚರಿಸಲು ಯೋಗ್ಯವಾಗಿರುವುದಿಲ್ಲ ಮತ್ತು ಮೈಲೇಜ್ ಕಡಿಮೆ ಇರುತ್ತದೆ. ಆದುದರಿಂದ ಈ ವಾಹನದ ಬದಲಿಗೆ ಹೊಸ ವಾಹನ ಖರೀದಿಸಲು ಅನುಮತಿ ನೀಡುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮೈಸೂರು ರವರು ಮೇಲೆ ಓದಲಾದ ದಿನಾಂಕ. 8-2-2012ರ ಪತ್ರದಲ್ಲಿ ಕೋರಿರುತ್ತಾರೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮೈಸೂರು ರವರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

## ಆದೇಶ ಸಂಖ್ಯೆ. ಗ್ರಾಅಪ 93 ಜಿಪಅ 2012, ಬೆಂಗಳೂರು, ದಿನಾಂಕ. 29-03-2012

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಮೈಸೂರು ಕಚೇರಿಯ ಉಪಯೋಗಕ್ಕಾಗಿ ಹೊಸ ವಾಹನವನ್ನು ಖರೀದಿಸಲು ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರದ ಅನುಮೋದನೆ ನೀಡಿದೆ.

1. *ಅಧಿಕೃತ ಜ್ಞಾಪನ ಸಂಖ್ಯೆ. ಸಿಆಸುಇ 174 ಶಿಖಾನಿ 2007, ದಿನಾಂಕ. 12-05-2008ರಲ್ಲಿ ರೂ. 5.00 ಲಕ್ಷಗಳ (ತೆರಿಗೆ ಹೊರತುಪಡಿಸಿ) ಮಿತಿಯೊಳಗೆ ಖರೀದಿಸುವುದು.*
2. *ಹಳೆಯ ವಾಹನವನ್ನು ನಿಯಮಾನುಸಾರ ವಿಲೇವಾರಿಗೊಳಿಸಿ ಬರುವಂತಹ ಹಣವನ್ನು ಸರ್ಕಾರದ ಲೆಕ್ಕಶೀರ್ಷಿಕೆಗೆ ಜಮಾ ಮಾಡುವುದು.*

ಈ ಆದೇಶವನ್ನು ಸರ್ಕಾರದ ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ. ಎಫ್‌ಡಿ 178 ವೆಚ್ಚ-6 2012, ದಿನಾಂಕ. 27-03-2012ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎನ್.ವೈ.ಸಾಗರ) 29/3/12
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕ ಪತ್ರ 1 & 2) / (ಆಡಿಟ್)

---2

2. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ರಿಸಾಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು,
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮೈಸೂರು.
4. ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಮೈಸೂರು.
5. ಗ್ರಾ.ಅ.ಪಂ.ಇಲಾಖೆಯ ಸರ್ಕಾರದ ಪ್ರದಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್)/ ಉಪ ಕಾರ್ಯದರ್ಶಿ ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
6. ಮೇಲ್ವಿಚಾರಕರು, ಗಣಕಯಂತ್ರ ವಿಭಾಗ, ಗ್ರಾ.ಅ.ಪಂ.ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಸಲುವಾಗಿ.
7. ರಕ್ಷಾ ಕಡತ / ಮಾಹಿತಿ ಕೇಂದ್ರ/ ಹೆಚ್ಚುವರಿ ಪ್ರತಿಗಳು.